All India Radio: Bangalore
National Bulletin In Kannada

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

05.12.2025 19.35 PM

<><><><>

ಮುಖ್ಯಾಂಶಗಳು

- ರಕ್ಷಣೆ, ವ್ಯಾಪಾರ ಸೇರಿದಂತೆ ೧೬ ಒಪ್ಪಂದಗಳಿಗೆ ಭಾರತ-ರಷ್ಯಾ ಸಹಿ
- ಭಾರತ ಶೀಘ್ರ ವಿಶ್ವದ ೩ನೇ ಅತಿದೊಡ್ಡ ಆರ್ಥಿಕತೆ : ಪ್ರಧಾನಿ ನರೇಂದ್ರ ಮೋದಿ ವಿಶ್ವಾಸ
- ವಿಮಾನ ಕರ್ತವ್ಯ ಸಮಯ ನೀತಿ ಆದೇಶ ರದ್ದುಪಡಿಸಿದ ನಾಗರಿಕ ವಿಮಾನಯಾನ ಸಚಿವಾಲಯ
- ಆರೋಗ್ಯ ಭದ್ರತೆ ಮತ್ತು ರಾಷ್ಟ್ರೀಯ ಭದ್ರತಾ ಸೆಸ್ ಮಸೂದೆ - ೨೦೨೫ ಅಂಗೀಕರಿಸಿದ ಲೋಕಸಭೆ

<><><><>

ಭಾರತ ಮತ್ತು ರಷ್ಯಾ ಇಂದು, ರಕ್ಷಣೆ, ವ್ಯಾಪಾರ, ಆರ್ಥಿಕತೆ, ಆರೋಗ್ಯ ರಕ್ಷಣೆ, ಶಿಕ್ಷಣ, ಸಂಸ್ಕೃತಿ ಮತ್ತು ಮಾಧ್ಯಮಕ್ಕೆ ಸಂಬಂಧಿಸಿದ ೧೬ ಒಪ್ಪಂದಗಳನ್ನು ವಿನಿಮಯ ಮಾಡಿಕೊಂಡಿವೆ. ನವದೆಹಲಿಯಲ್ಲಿಂದು ನಡೆದ ೨೩ನೇ ಭಾರತ-ರಷ್ಯಾ ವಾರ್ಷಿಕ ಶೃಂಗಸಭೆಯಲ್ಲಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ-ರಷ್ಯಾ ಸ್ನೇಹವು ಜಾಗತಿಕ ಸವಾಲುಗಳನ್ನು ಎದುರಿಸಲು ಶಕ್ತಿಯನ್ನು ನೀಡುತ್ತದೆ. ಈ ವಿಶ್ವಾಸವು ಎರಡೂ ರಾಷ್ಟ್ರಗಳ ಹಂಚಿಕೆಯ ಭವಿಷ್ಯವನ್ನು ಶ್ರೀಮಂತಗೊಳಿಸುತ್ತದೆ ಎಂದು ಹೇಳಿದರು. ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತ ಮತ್ತು ರಷ್ಯಾ ಒಟ್ಟಾಗಿ ನಿಂತಿವೆ. ಭಯೋತ್ಪಾದನೆಯು ಮಾನವೀಯ ಮೌಲ್ಯಗಳ ಮೇಲಿನ ನೇರ ದಾಳಿಯಾಗಿದೆ. ಭಯೋತ್ಪಾದನೆಯ ವಿರುದ್ಧ ಜಾಗತಿಕ ಏಕತೆಯೇ ದೊಡ್ಡ ಶಕ್ತಿಯಾಗಿದೆ ಎಂದು ಪ್ರತಿಪಾದಿಸಿದರು. ಉಕ್ರೇನ್ ವಿಷಯದಲ್ಲಿ ಭಾರತವು ಮೊದಲಿನಿಂದಲೂ ಶಾಂತಿಯನ್ನು ಪ್ರತಿಪಾದಿಸುತ್ತಿದೆ. ಈ ನಿಟ್ಟಿನಲ್ಲಿ ಶಾಂತಿಯುತ ಮತ್ತು ಶಾಶ್ವತ ಪರಿಹಾರಕ್ಕಾಗಿ ಮಾಡಲಾಗುತ್ತಿರುವ ಎಲ್ಲಾ ಪ್ರಯತ್ನಗಳನ್ನು ಭಾರತ ಸ್ವಾಗತಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೧ ಸೆಕೆಂಡ್‌ಗಳು)**

ಯುರೇಷಿಯನ್ ಆರ್ಥಿಕ ಒಕ್ಕೂಟದೊಂದಿಗೆ ಮುಕ್ತ ವ್ಯಾಪಾರ ಒಪ್ಪಂದವನ್ನು ಶೀಘ್ರವಾಗಿ ಅಂತಿಮಗೊಳಿಸುವ ನಿಟ್ಟಿನಲ್ಲಿ ಎರಡೂ ಕಡೆಯವರು ಕೆಲಸ ಮಾಡುತ್ತಿದ್ದಾರೆ ಎಂದರು. ಭಾರತವು

ಶೀಘ್ರದಲ್ಲೇ ರಷ್ಯಾದ ನಾಗರಿಕರಿಗೆ ೩೦ ದಿನಗಳ ಉಚಿತ ಇ-ಪ್ರವಾಸಿ ವೀಸಾ ಮತ್ತು ೩೦ ದಿನಗಳ ಗುಂಪು ಪ್ರವಾಸಿ ವೀಸಾವನ್ನು ಪ್ರಾರಂಭಿಸಲಿದೆ ಎಂದು ಪ್ರಧಾನಿ ಮೋದಿ ಘೋಷಿಸಿದರು.

<><><>

ದ್ವಿಪಕ್ಷೀಯ ವ್ಯಾಪಾರದ ಅಡೆತಡೆ ಇಲ್ಲದ ನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ರಾಷ್ಟ್ರೀಯ ಕರೆನ್ಸಿಗಳ ಬಳಕೆಯ ಮೂಲಕ ದ್ವಿಪಕ್ಷೀಯ ವಸಹಾತು ವ್ಯವಸ್ಥೆ ಜಂಟಿಯಾಗಿ ಅಭಿವೃದ್ಧಿಪಡಿಸುವುದನ್ನು ಭಾರತ ಮತ್ತು ರಷ್ಯಾ ಒಪ್ಪಿಕೊಂಡಿವೆ. ೨೩ನೇ ಭಾರತ-ರಷ್ಯಾ ಶೃಂಗಸಭೆಯ ನಂತರ ಜಂಟಿ ಹೇಳಿಕೆಯಲ್ಲಿ ಈ ವಿಷಯವನ್ನು ತಿಳಿಸಲಾಗಿದೆ. ರಾಷ್ಟ್ರೀಯ ಪಾವತಿ ವ್ಯವಸ್ಥೆ ಹಣಕಾಸು ಸಂದೇಶ ವ್ಯವಸ್ಥೆ ಮತ್ತು ಕೇಂದ್ರ ಬ್ಯಾಂಕ್ ಡಿಜಿಟಲ್ ಕರೆನ್ಸಿ ವೇದಿಕೆಗಳ ಪರಸ್ಪರ ಕಾರ್ಯ ಸಾಧ್ಯತೆಯನ್ನು ಸಕ್ರಿಯಗೊಳಿಸುವ ಕುರಿತು ಎರಡೂ ಕಡೆಯವರು ತಮ್ಮ ಚರ್ಚೆಗಳನ್ನು ಮುಂದುವರಿಸಲು ಒಪ್ಪಿಕೊಂಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಭಾರತ-ರಷ್ಯಾ ವ್ಯಾಪಾರ ವೇದಿಕೆಯ ಸಹ ಅಧ್ಯಕ್ಷತೆ ವಹಿಸಿದ್ದಾರೆ. ಈ ವೇಳೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಸುಧಾರಣೆ, ಕಾರ್ಯಕ್ಷಮತೆ ಮತ್ತು ರೂಪಾಂತರ ನೀತಿಯನ್ನು ಸ್ಥಿರವಾಗಿ ಅನುಸರಿಸುವ ಮೂಲಕ ಭಾರತ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಹಾದಿಯಲ್ಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

<><><>

ಆರ್ಥಿಕ ಬೆಳವಣಿಗೆಯನ್ನು ಮತ್ತಷ್ಟು ಬಲಪಡಿಸುವ ಪ್ರಯತ್ನದ ಭಾಗವಾಗಿ ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ಇಂದು ಬಡ್ಡಿ ದರದಲ್ಲಿ ೨೫ ಮೂಲಾಂಶಗಳನ್ನು ಕಡಿತಗೊಳಿಸಿ, ಶೇಕಡಾ ೫.೨೫ ಕ್ಕೆ ಇಳಿಸಿದೆ. ಪ್ರಸಕ್ತ ಹಣಕಾಸು ವರ್ಷದ ಐದನೇ ದ್ವೈಮಾಸಿಕ ಹಣಕಾಸು ನೀತಿಯನ್ನು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಪ್ರಕಟಿಸಿದ್ದಾರೆ. ಈ ಬೆಳವಣಿಗೆಯು ವಸತಿ, ವಾಹನ ಮತ್ತು ವಾಣಿಜ್ಯ ಸಾಲಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ದರಗಳನ್ನು ಅಗ್ಗವಾಗಿಸುವ ನಿರೀಕ್ಷೆಯಿದೆ. ಭಾರತದ ಚಿಲ್ಲರೆ ಹಣದುಬ್ಬರವು ೨೦೨೫ ರ ಅಕ್ಟೋಬರ್‌ನಲ್ಲಿ ಐತಿಹಾಸಿಕ ಕನಿಷ್ಠ ಮಟ್ಟವಾದ ೦.೨೫ ಪ್ರತಿಶತಕ್ಕೆ ಇಳಿದಿದೆ. ಇದು ಗ್ರಾಹಕ ಬೆಲೆ ಸೂಚ್ಯಂಕ ಸಿಪಿಐ ಸರಣಿಯನ್ನು ಪರಿಚಯಿಸಿದ ನಂತರದ ಅತ್ಯಂತ ಕಡಿಮೆ ಮಟ್ಟವನ್ನು ಸೂಚಿಸುತ್ತದೆ. ಆರ್‌ಬಿಐನ ಈ ನಿರ್ಧಾರವನ್ನು ಭಾರತೀಯ ರಫ್ತು ಸಂಸ್ಥೆಗಳ ಒಕ್ಕೂಟ ಸ್ವಾಗತಿಸಿದೆ.

<><><>

ನಾಗರಿಕ ವಿಮಾನಯಾನ ಮಹಾ ನಿರ್ದೇಶನಾಲಯದ ವಿಮಾನ ಕರ್ತವ್ಯ ಸಮಯಮಿತಿ ಆದೇಶಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲಾಗಿದೆ ಎಂದು ನಾಗರಿಕ ವಿಮಾನಯಾನ ಸಚಿವ ರಾಮ್‌ಮೋಹನ್ ನಾಯ್ಡು ತಿಳಿಸಿದ್ದಾರೆ. ಇಂಡಿಗೋ ಏರ್‌ಲೈನ್ಸ್ ವಿಮಾನಗಳ ವೇಳಾಪಟ್ಟಿಯಲ್ಲಿ ಉಂಟಾಗಿರುವ ಅಡಚಣೆಯನ್ನು ಪರಿಹರಿಸಲು ಸರ್ಕಾರ ತುರ್ತು ಮತ್ತು ಪೂರ್ವಭಾವಿ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ತಿಳಿಸಿದರು. ಪ್ರಯಾಣಿಕರು

ವಿಶೇಷವಾಗಿ ಹಿರಿಯ ನಾಗರಿಕರು, ವಿದ್ಯಾರ್ಥಿಗಳು, ರೋಗಿಗಳು ಮತ್ತು ತುರ್ತು ಅಗತ್ಯಗಳಿಗಾಗಿ ಸಕಾಲಿಕ ವಿಮಾನ ಪ್ರಯಾಣವನ್ನು ಅವಲಂಬಿಸಿರುವ ಇತರರ ಹಿತದೃಷ್ಟಿಯಿಂದ ಮಾತ್ರ ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ ಎಂದು ಸಚಿವರು ವಿವರಿಸಿದರು. ಸಮಸ್ಯೆಗಳನ್ನು ಪರಿಹರಿಸಲು ಮತ್ತು ತ್ವರಿತ ಕ್ರಮಕ್ಕಾಗಿ ವಿಮಾನಯಾನ ಸಚಿವಾಲಯವು ದಿನದ ೨೪ ಗಂಟೆ ಕಾರ್ಯನಿರ್ವಹಿಸುವ ನಿಯಂತ್ರಣಾ ಕೊಠಡಿಯನ್ನು ಸ್ಥಾಪಿಸಿದೆ. ವಿಮಾನ ಪ್ರಯಾಣಿಕರು ದೂರವಾಣಿ ಸಂಖ್ಯೆ ೦೧೧-೨೪೬೧೦೮೪೩, ೦೧೧-೨೪೬೯೩೯೬೩, ೦೯೬೫೦೩-೯೧೮೫೯ ಗೆ ಕರೆ ಮಾಡಿ ಅಗತ್ಯ ಮಾಹಿತಿ ಪಡೆಯಬಹುದಾಗಿದೆ.

<><><><>

ಲೋಕಸಭೆಯು ಆರೋಗ್ಯ ಭದ್ರತೆ ಮತ್ತು ರಾಷ್ಟ್ರೀಯಾ ಭದ್ರತಾ ಸೆಸ್ ಮಸೂದೆ -೨೦೨೫ ಅನ್ನು ಅಂಗೀಕರಿಸಿದೆ.

ಪಾನ್ ಮಸಲಾ ಸೇರಿದಂತೆ ಇತರ ಪಾನ್ ಉತ್ಪನ್ನಗಳ ಮೇಲೆ ಸೆಸ್ ವಿಧಿಸುವ ಮೂಲಕ ಆರೋಗ್ಯ ಮತ್ತು ರಾಷ್ಟ್ರೀಯ ಭದ್ರತೆಗೆ ಸಂಪನ್ಮೂಲವನ್ನು ಕ್ರೋಢೀಕರಿಸುವ ಗುರಿಯನ್ನು ಈ ಮಸೂದೆ ಹೊಂದಿದೆ. ಸೆಸ್‌ನಿಂದ ಬರುವ ಆದಾಯವನ್ನು ಸಾರ್ವಜನಿಕ ಆರೋಗ್ಯ ಮತ್ತು ರಾಷ್ಟ್ರೀಯ ಭದ್ರತೆ ವೆಚ್ಚಕ್ಕೆ ವಿನಿಯೋಗಿಸಲಾಗುತ್ತಿದೆ. ಮಸೂದೆಯ ಮೇಲಿನ ಚರ್ಚೆಗೆ ಉತ್ತರಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಸಂಗ್ರಹಿಸಿದ ಸೆಸ್ ಅನ್ನು ಸಾರ್ವಜನಿಕ ಆರೋಗ್ಯಕ್ಕಾಗಿ ಮತ್ತು ರಕ್ಷಣಾ ವ್ಯವಸ್ಥೆಯನ್ನು ಬಲಪಡಿಸಲು ಖರ್ಚು ಮಾಡಲಾಗುವುದು. ಸಾರ್ವಜನಿಕ ಆರೋಗ್ಯವು ರಾಜ್ಯ ಸರ್ಕಾರಗಳ ವಿಷಯವಾಗಿದೆ. ಆದರೆ ರಕ್ಷಣೆಯು ಕೇಂದ್ರ ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಹೇಳಿದರು.

<><><><>

ಸೂಕ್ಷ್ಮ ಪೋಷಕಾಂಶ ರಸಗೊಬ್ಬರಗಳ ಮೇಲಿನ ಜಿಎಸ್‌ಟಿ ಅನ್ನು ಶೇಕಡ ೧೨ ರಿಂದ ಶೇಕಡ ೫ಕ್ಕೆ ಇಳಿಸಿರುವುದರಿಂದ ರೈತರಿಗೆ ಕೃಷಿ ವೆಚ್ಚ ಕಡಿಮೆಯಾಗಲಿದೆ ಎಂದು ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಜೆ.ಪಿ.ನಡ್ಡಾ ಹೇಳಿದ್ದಾರೆ. ಲೋಕಸಭೆಯ ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಜಿಎಸ್‌ಟಿ ಇಳಿಕೆಯಿಂದ ವಿಶೇಷವಾಗಿ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಕೈಗೆಟಕುವ ಬೆಲೆಯಲ್ಲಿ ಸೂಕ್ಷ್ಮ ಪೋಷಕಾಂಶ ರಸಗೊಬ್ಬರ ದೊರೆಯಲಿದೆ ಎಂದರು. ಭಾರತೀಯ ಸೂಕ್ಷ್ಮ ರಸಗೊಬ್ಬರ ತಯಾರಕರ ಸಂಘದ ಪ್ರಕಾರ, ಈ ಕ್ರಮದಿಂದಾಗಿ ಭತ್ತದಲ್ಲಿ ಎಕರೆಗೆ ೧೪೦ ರೂಪಾಯಿ, ಕಬ್ಬಿನಲ್ಲಿ ಎಕರೆಗೆ ೧೯೯ ರೂಪಾಯಿ, ಆಲುಗಡ್ಡೆಯಲ್ಲಿ ೪೪೬ ರೂಪಾಯಿ ಮತ್ತು ಗೋಧಿಯಲ್ಲಿ ೧೪೬ ರೂಪಾಯಿ ರೈತರಿಗೆ ಉಳಿತಾಯವಾಗಲಿದೆ ಎಂದು ಹೇಳಿದರು.

<><><><>

ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಈ ಹಣಕಾಸು ವರ್ಷದಲ್ಲಿ ರಾಜ್ಯಗಳ ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ೬೮ ಸಾವಿರದ ೩೯೩ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಖಾತೆ ಸಚಿವ ಕಮಲೇಶ್ ಪಾಸ್ವಾನ್ ತಿಳಿಸಿದ್ದಾರೆ.

<><><><>

ರಾಜಸ್ಥಾನದ ಮರುಭೂಮಿಯಲ್ಲಿ ಭಾರತ ಮತ್ತು ಮಲೇಷಿಯಾ ಜಂಟಿಯಾಗಿ 'ಹರಿಮೌವ್ ಶಕ್ತಿ' ಮಿಲಿಟರಿ ಸಮರಾಭ್ಯಾಸದಲ್ಲಿ ಭಾಗಿಯಾಗಿವೆ. ಈ ಸಮರಾಭ್ಯಾಸದ ಐದನೇ ಆವೃತ್ತಿಯು ಈ ತಿಂಗಳ ೧೮ರವರೆಗೆ ಮುಂದುವರಿಯಲಿದೆ. ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳ ಸಮಯದಲ್ಲಿ ಜಂಟಿ ಪ್ರತಿಕ್ರಿಯೆಗಳನ್ನು ಸಂಯೋಜಿಸುವುದು ಈ ಸಮಾರಾಭ್ಯಾಸದ ಉದ್ದೇಶಗಳಲ್ಲಿ ಒಂದಾಗಿದೆ.

<><><><>

ಜಾರಿ ನಿರ್ದೇಶನಾಲಯವು ರಿಲಯನ್ಸ್ ಅನಿಲ್ ಅಂಬಾನಿ ಗ್ರೂಪ್‌ನ ೧ ಸಾವಿರದ ೧೨೦ ಕೋಟಿ ರೂಪಾಯಿ ಮೌಲ್ಯದ ೧೮ಕ್ಕೂ ಹೆಚ್ಚು ಆಸ್ತಿಗಳು, ಸ್ಥಿರ ಠೇವಣಿಗಳು, ಬ್ಯಾಂಕ್ ಉಳಿತಾಯ ಮತ್ತು ಷೇರುಗಳನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡಿದೆ. ರಿಲಯನ್ಸ್ ಅನಿಲ್ ಅಂಬಾನಿ ಗ್ರೂಪ್‌ನ ಬ್ಯಾಂಕ್ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅಕ್ರಮ ಹಣ ತಡೆ ಕಾಯ್ದೆ ಅಡಿಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

<><><><>

ಚೆನ್ನೈನ ಎಗ್ಮೋರ್‌ನಲ್ಲಿ ನಡೆಯಲಿರುವ ೨೦೨೫ ರ ಎಫ್‌ಐಎಚ್ ಪುರುಷರ ಜೂನಿಯರ್ ಹಾಕಿ ವಿಶ್ವಕಪ್‌ನ ಕ್ವಾರ್ಟರ್ ಫೈನಲ್‌ನಲ್ಲಿ ಇಂದು ಭಾರತ ಸಾಂಪ್ರದಾಯಿಕ ಎದುರಾಳಿ ಬೆಲ್ಜಿಯಂ ಅನ್ನು ಎದುರಿಸಲಿದೆ. ಪಂದ್ಯ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಗುಂಪು ಹಂತದಲ್ಲಿ ಭಾರತ ಚಿಲಿಯನ್ನು ೭-೦, ಓಮಾನ್ ಅನ್ನು ೧೭-೦ ಮತ್ತು ಸ್ವಿಟ್ಜರ್‌ಲ್ಯಾಂಡ್ ಅನ್ನು ೫-೦ ಅಂತರದಿಂದ ಸೋಲಿಸಿದೆ.

<><><><>

೨೦೨೫ರ ಮಹಿಳಾ ಎಚ್‌ಐಎಫ್ ಹಾಕಿ ಜೂನಿಯರ್ ವಿಶ್ವ ಕಪ್‌ನಲ್ಲಿ ಭಾರತ ಇಂದು ಸಂಜೆ ಚಿಲಿಯ ಸ್ಯಾಂಟಿಯಾಗೊದಲ್ಲಿ ತನ್ನ ಅಂತಿಮ ಗುಂಪು ಪಂದ್ಯದಲ್ಲಿ ಐರ್ಲೆಂಡ್ ತಂಡವನ್ನು ಎದುರಿಸಲಿದೆ. ಎರಡೂ ಪಂದ್ಯಗಳಲ್ಲಿ ಒಂದು ಗೆಲುವು ಹಾಗೂ ಒಂದು ಸೋಲಿನೊಂದಿಗೆ ಅಂಕಪಟ್ಟಿಯಲ್ಲಿ ಭಾರತ ೨ನೇ ಸ್ಥಾನದಲ್ಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>